# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1056 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 17.03.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಪಡಿತರ ವಿತರಣೆಯನ್ನು ವ್ಯವಸ್ಥಿತವಾಗಿ ನೆರವೇರಿಸಲು ಬಳಸಲಾಗುತ್ತಿರುವ ತಂತ್ರಾಂಶಗಳಲ್ಲಿ ಉಂಟಾಗುತ್ತಿರುವ ತಾಂತ್ರಿಕ ಅಡಚಣೆಗಳಿಂದ ಸಾರ್ವಜನಿಕರು ತೊಂದರೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸೆಪ್ಟೆಂಬರ್ 2024- ರ ಮೊದಲು ಆಹಾರ ಇಲಾಖೆಯ ಸರ್ವರ್ ಗಳನ್ನು ಎನ್.ಐ.ಸಿ ಡೇಟಾ ಸೆಂಟರ್‌ನಲ್ಲಿ ನಿರ್ವಹಿಸಲಾಗುತ್ತಿತ್ತು. ಈ ಸರ್ವರ್‌ಗಳು 10 ವರ್ಷಕ್ಕಿಂತ ಹಳೆಯದಾಗಿದ್ದು, ಇದರಿಂದಾಗಿ ಕಾರ್ಯಕ್ಷಮತೆ ಮತ್ತು ನಿಧಾನತೆಯ ಸಮಸ್ಯೆ ಇತ್ತು.<br>ಸೆಪ್ಟೆಂಬರ್-2024 ಮತ್ತು ಅಕ್ಟೋಬರ್-2024 ರಿಂದ ಆಹಾರ ಇಲಾಖೆಯು ಆಹಾರ ಪಿಸ್ಟ್ ಮತ್ತು ಎಂಎಸ್‌ಪಿ ವೆಬ್ ಅಪ್ಲಿಕೇಷನ್‌ಗಳನ್ನು ಕರ್ನಾಟಕ ರಾಜ್ಯ ಡೇಟಾ ಕೇಂದ್ರಕ್ಕೆ (Karnataka State Data Centre) ಸ್ಥಳಾಂತರಗೊಳಿಸಲಾಗಿದೆ.<br>ಪ್ರಸ್ತುತ ಕೆ.ಎಸ್.ಡಿ.ಸಿಗೆ ಸ್ಥಳಾಂತರಗೊಂಡಿರುವುದರಿಂದ ಯಾವುದೇ ಕಾರ್ಯಕ್ಷಮತೆಯ ಸಮಸ್ಯೆಗಳಿರುವುದಿಲ್ಲ. ಮತ್ತು ವೆಬ್ ಅಪ್ಲಿಕೇಷನ್‌ಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ ಹಾಗೂ ಪಡಿತರ ವಿತರಣೆಯಲ್ಲಿಯೂ ಸಹ ಯಾವುದೇ ತಾಂತ್ರಿಕ ಸಮಸ್ಯೆಗಳಿರುವುದಿಲ್ಲ. |
| ಆ | ಬಂದಿದ್ದಲ್ಲಿ, ತಂತ್ರಾಂಶಗಳಲ್ಲಿ ಉಂಟಾಗುತ್ತಿರುವ ತಾಂತ್ರಿಕ ಅಡಚಣೆಗಳನ್ನು ಸರಿಪಡಿಸಿ ಪಡಿತರ ವಿತರಣೆಯನ್ನು ಸುಲಲಿತವಾಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | |

ಇ-ಆನಾಸ 93 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು